ಇ) ಸಮಿತಿಯ ಶಿಫಾರಸ್ಸುಗಳನ್ನು ಪರಿಶೀಲಿಸಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿಯನ್ನು ಇಷ್ಟರಲ್ಲೇ ತರಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ವೈದ್ಯಕೀಯ ವಿದ್ಯಾರ್ಥಿಗಳಿಗೆ ಉಚಿತ ಅವಕಾಶ.

1801 - ಶ್ರೀಮತಿ ಬಿ. ಟಿ. ಲಲಿತಾನಾಯಕ್ (ದೇವದುರ್ಗ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಲ್ಲಿ ಹೈದರಾಬಾದ್ ಕರ್ನಾಟಕದಲ್ಲಿ ಎಷ್ಟು ಜನ ವೈದ್ಯಕೀಯ ವಿದ್ಯಾರ್ಥಿಗಳಿಗೆ ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ? ಅದರಲ್ಲಿ ಮಹಿಳೆಯರು ಮತ್ತು ಪುರುಷರ ಸಂಖ್ಯೆ ಎಷ್ಟು?

ಡಾ|| ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) 837.

	1994-95	1995-96	1996-97	ಒಟ್ಟು
ಪುರುಷರು	216	171	173	560
ಮಹಿಳೆಯರು	95	88	94	277
	311	**259**	**267**	**837**

ವಯಸ್ಕರ ಶಿಕ್ಷಣಕ್ಕಾಗಿ ತಗಲಿದ ವೆಚ್ಚ.

1802 - ಶ್ರೀಮತಿ ಬಿ. ಟಿ. ಲಲಿತಾ ನಾಯಕ್ (ದೇವದುರ್ಗ) : ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಜನ ಸ್ತ್ರೀ ಪುರುಷರಿಗೆ ವಯಸ್ಕರ ಶಿಕ್ಷಣ ನೀಡಲಾಗಿದೆ?

ಆ) 1995-96 ಮತ್ತು 1996-97ನೇ ಸಾಲಿನಲ್ಲಿ ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :

ಅ) (ಲಕ್ಷಗಳಲ್ಲಿ)

ವರ್ಷ	ಸ್ತ್ರೀ	ಪುರುಷರು	ಒಟ್ಟು
1995-96	4.69	3.13	7.82
1996-97	3.49	2.34	5.83